ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2019 /1462

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 11-11-2019.

## ಹಿಂಬರಹ

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 48 ಎಸ್‌ಎಂಆರ್ 2018 ದಿನಾಂಕ:13/09/2019 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೈಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ (8)ಬಿ ಮತ್ತು ಇ.ಎಸ್.ಟಿ (8)ಸಿ ವಿಭಾಗಗಳಿಗೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ನೌಕರರು ಸರ್ಕಾರದಿಂದ ಮಾನ್ಯತೆ ಹೊಂದಿಲ್ಲದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸೆಯ ಮರುಪಾವತಿಯ ಅರ್ಹತಾದಾಯಕ ಮೊತ್ತದ ಮಾಹಿತಿಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಿಂದ ಪಡೆಯುವ ಬಗ್ಗೆ.

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ರನ್ವಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರು ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸೆಯ ಮರುಪಾವತಿ ವೆಚ್ಚವನ್ನು ಸಕ್ಷಮ ಮಂಜೂರಾತಿ ಪ್ರಾಧಿಕಾರಿಗಳು ಸಿಜಿಹೆಚ್‌ಎಸ್ ದರಪಟ್ಟಿಯನುಸಾರ ಮಂಜೂರು ಮಾಡಲು ಅಧಿಕಾರ ಹೊಂದಿರುತ್ತಾರೆ.

ಆದರೆ, ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 31 ಎಸ್‌ಎಂಆರ್ 2014 ದಿನಾಂಕ:05.11.2014ರಲ್ಲಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ನೌಕರರು ಸರ್ಕಾರದಿಂದ ಮಾನ್ಯತೆ ಹೊಂದಿರದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸೆಯ ಮರುಪಾವತಿ ಪ್ರಕರಣಗಳನ್ನು ಅಪವಾದಾತ್ಮಕ/ವಿಶೇಷ ಪ್ರಕರಣಗಳೆಂದು ಪರಿಗಣಿಸಿ, ಸಿ.ಜಿ.ಹೆಚ್.ಎಸ್ ದರಗಳನ್ನು ಅಥವಾ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ನಿಗದಿಪಡಿಸುವ ಅರ್ಹತಾ ಮೊತ್ತವನ್ನು ನಿಯಮ ಸಡಿಲಿಸಿ ಮಂಜೂರು ಮಾಡಲು ಇಲಾಖಾ ಕಾರ್ಯದರ್ಶಿಗಳಿಗೆ ಮಾತ್ರ ಅಧಿಕಾರ ಪ್ರತ್ಯಾಯೋಜನೆ ಮಾಡಲಾಗಿದೆ.

ಸರ್ಕಾರಿ ನೌಕರರು ಸರ್ಕಾರದಿಂದ ಮಾನ್ಯತೆ ಹೊಂದಿರದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ವೆಚ್ಚದ ಕ್ಲೇಮುಗಳ ಅರ್ಹತಾದಾಯಕ ಮೊತ್ತದ ಬಗ್ಗೆ ಹಲವಾರು ಇಲಾಖೆಗಳು ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಗೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿದ್ದು, ಅವರಿಂದ ಇಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಿ ಅರ್ಹತಾದಾಯಕ ಮೊತ್ತವನ್ನು ಸಂಬಂಧಪಟ್ಟ ಇಲಾಖೆಗಳಿಗೆ ಸಕಾಲದಲ್ಲಿ ತಿಳಿಸಲು ಸಾಧ್ಯವಾಗದೇ, ವೈದ್ಯಕೀಯ ವೆಚ್ಚಗಳನ್ನು ಮರುಪಾವತಿಸುವಲ್ಲಿ ಅನಗತ್ಯ ವಿಳಂಬ ಉಂಟಾಗುತ್ತಿರುವುದನ್ನು ಸರ್ಕಾರವು ಗಮನಿಸಿದೆ.

ಈ ಹಿನ್ನೆಲೆಯಲ್ಲಿ, ಸರ್ಕಾರಿ ನೌಕರರ ಇಂತಹ ವೈದ್ಯಕೀಯ ವೆಚ್ಚದ ಕ್ಲೇಮುಗಳನ್ನು ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಬದಲಾಗಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ಗೆ ಸಲ್ಲಿಸಿ ಸದರಿ ಸಂಸ್ಥೆಯಿಂದ ಮರುಪಾವತಿಸಬಹುದಾದ ಅರ್ಹತಾದಾಯಕ ಮೊತ್ತದ ಮಾಹಿತಿಯನ್ನು ಪಡೆಯುವಂತೆ ಎಲ್ಲಾ ಇಲಾಖೆಗಳಿಗೆ ಸೂಚಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

...2

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 48 ಎಸ್‌ಎಂಆರ್ 2018(ಭಾ), ಬೆಂಗಳೂರು, ದಿನಾಂಕ:13.09.2019.**

ಪಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರು ಸರ್ಕಾರದಿಂದ ಮಾನ್ಯತೆ ಹೊಂದಿರದ ಖಾಸಗಿ ಆಸ್ಪತ್ರೆಗಳಲ್ಲಿ ಪಡೆದ ವೈದ್ಯಕೀಯ ಚಿಕಿತ್ಸೆಯ ಮರುಪಾವತಿಯ ಅರ್ಹತಾದಾಯಕ ಮೊತ್ತದ ಬಗ್ಗೆ ಪ್ರಸ್ತಾವನೆಗಳನ್ನು ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, 4ನೇ ಮಹಡಿ, ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560027 ಇವರಿಗೆ ಸಲ್ಲಿಸುವಂತೆ ಎಲ್ಲಾ ಇಲಾಖೆಗಳಿಗೆ ಸೂಚಿಸಲಾಗಿದೆ. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇಂತಹ ಪ್ರತಿಯೊಂದು ಕ್ಲೇಮುಗಳನ್ನು ಸಿ.ಜಿ.ಹೆಸ್‌ಎಸ್ ದರಪಟ್ಟಿಯಂತೆ ಪರಿಶೀಲಿಸಿ ಮರುಪಾವತಿಸಬಹುದಾದ ಅರ್ಹತಾದಾಯಕ ಮೊತ್ತದ ಮಾಹಿತಿಯನ್ನು ಸಕಾಲದಲ್ಲಿ ಸಂಬಂಧಪಟ್ಟ ಇಲಾಖೆಗಳಿಗೆ ತಿಳಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಹಾಸ ಗಂ.ತಾಳೂಕರ)
ಸರ್ಕಾರದ ಉಪ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು- ಇವರಿಗೆ ರಾಜ್ಯಪತ್ರದ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 300 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-2), ಕೊಠಡಿ ಸಂಖ್ಯೆ: 30, ವಿಧಾನಸೌಧ, ಬೆಂಗಳೂರು-560 001 ಇವರಿಗೆ ಒದಗಿಸಲು.

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿ /ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.

. . . . 3

7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ವಿಧಾನ ಸೌಧ, ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು.
9. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯ ಪುರಿ, ನವದೆಹಲಿ-110011.
10. ಎಲ್ಲಾ ಇಲಾಖಾ ಮುಖ್ಯಸ್ಥರು.
11. ಎಲ್ಲಾ ಪ್ರಾದೇಶಿಕ ಆಯುಕ್ತರು.
12. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
13. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
14. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
15. ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
16. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, 4ನೇ ಮಹಡಿ, ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು-560027.
17. ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು.
18. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
20. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
21. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
22. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
23. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
24. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
25. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು/ವಾರದ ಗೆಜೆಟ್.

*****